**Akashvani : Bangalore**
**Regional Bulletin In Kannada**
**28.02.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**೧. ಮಾರ್ಚ್ ೩ ರಿಂದ ರಾಜ್ಯ ಬಜೆಟ್ ಅಧಿವೇಶನ; ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲರಿಗೆ ಆಹ್ವಾನ**

**೨. ಬೇಸಿಗೆಯಲ್ಲಿ ವಿದ್ಯುತ್ ಕೊರತೆಯಾಗದಂತೆ ಕ್ರಮ - ಇಂಧನ ಸಚಿವ ಕೆ.ಜೆ.ಜಾರ್ಜ್**

**೩. ದ್ವಿತಿಯ ಪಿಯುಸಿ ಪರೀಕ್ಷೆ ನಾಳೆಯಿಂದ ಆರಂಭ; ಸುಗಮ ಪರೀಕ್ಷೆಗಾಗಿ ಸಕಲ ಸಿದ್ಧತೆ**

**೪. ಇಂದು ರಾಷ್ಟ್ರೀಯ ವಿಜ್ಞಾನ ದಿನ; ಹಲವೆಡೆ ಜಾಗೃತಿ ಕಾರ್ಯಕ್ರಮ ಆಯೋಜನೆ**

**೫. ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ನಾಳೆ ಚಾಲನೆ**

**<><*<><>*><>**

ಮಾರ್ಚ್ ೩ ರಿಂದ ರಾಜ್ಯ ಬಜೆಟ್ ಅಧಿವೇಶನ ಆರಂಭವಾಗಲಿದೆ. ಅಂದು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಇಂದು ಆಹ್ವಾನ ನೀಡಲಾಯಿತು. ರಾಜಭವನದಲ್ಲಿ ರಾಜ್ಯಪಾಲರನ್ನು ಭೇಟಿಯಾದ ವಿಧಾನಸಭಾಧ್ಯಕ್ಷ ಯು. ಟಿ. ಖಾದರ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಅವರು, ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ಆಹ್ವಾನಿಸಿದರು. ಮಾರ್ಚ್ ೭ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯ ಬಜೆಟ್ ಮಂಡಿಸಲಿದ್ದಾರೆ.

**<><*<><>*><>**

ಬೇಸಿಗೆಯಲ್ಲಿ ೧೯ ಸಾವಿರ ಮೆಗಾ ವ್ಯಾಟ್‌ನಷ್ಟು ವಿದ್ಯುತ್ ಬೇಡಿಕೆಯನ್ನು ಈಡೇರಿಸಲು ಇಂಧನ ಇಲಾಖೆ ಸಿದ್ಧವಾಗಿದ್ದು, ಯಾವುದೇ ಸಂದರ್ಭದಲ್ಲೂ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೇಸಿಗೆಯಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಪ್ರತಿ ದಿನ ೭ ಗಂಟೆ ಮತ್ತು ಇತರ ಉದ್ದೇಶಗಳಿಗೆ ದಿನದ ೨೪ ಗಂಟೆ ವಿದ್ಯುತ್ ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದ

ಎಂದು ತಿಳಿಸಿದರು. ರಾಜ್ಯದಲ್ಲಿ ಬೇಡಿಕೆ ಇರುವಷ್ಟು ವಿದ್ಯುತ್ ಲಭ್ಯವಿದೆ. ಸ್ಥಳೀಯವಾಗಿ ತಾಂತ್ರಿಕ ಕಾರಣಗಳಿಂದ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಬಹುದೇ ಹೊರತು ಲೋಡ್ ಶೆಡ್ಡಿಂಗ್ ಮಾಡುವ ಸಂದರ್ಭ ಉದ್ಭವವಾಗುವುದಿಲ್ಲ ಎಂದು ಹೇಳಿದರು.

<><*<><>*><>

ದ್ವಿತೀಯ ಪಿಯುಸಿ ಪರೀಕ್ಷೆಗಳು ನಾಳೆಯಿಂದ ಆರಂಭವಾಗಲಿದ್ದು, ಯಾವುದೇ ಲೋಪವಾಗದಂತೆ ಸುಗಮ ಪರೀಕ್ಷೆಗಾಗಿ ಪದವಿಪೂರ್ವ ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಬಾಗಲಕೋಟೆ ಪರೀಕ್ಷೆ ಸೂಸುತ್ರವಾಗಿ ನಡೆಸಲು ಎಲ್ಲ ರೀತಿಯ ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ೧೯ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಬಾರಿ ಜಿಲ್ಲೆಯಲ್ಲಿ ೧೧ ಸಾವಿರದ ೩೮೯ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ. ಮೈಸೂರು ಜಿಲ್ಲೆಯಲ್ಲಿ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲು ಸನ್ನದ್ಧರಾಗಿರುವಂತೆ ಅಧಿಕಾರಿಗಳಿಗೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು. ಕೋಲಾರ ಜಿಲ್ಲೆಯಲ್ಲಿ ಸುಗಮವಾಗಿ ಪರೀಕ್ಷೆ ನಡೆಸಲು ಜಿಲ್ಲಾಡಳಿತ ಸಿದ್ಧತೆ ಮಾಡಿಕೊಂಡಿದೆ. ವಿದ್ಯಾರ್ಥಿಗಳು ಯಾವುದೇ ವದಂತಿಗಳಿಗೆ ಕಿವಿಗೊಡದೆ ಪರೀಕ್ಷೆ ಬರೆಯುವಂತೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

<><*<><>*><>

ಸರ್.ಸಿ.ವಿ.ರಾಮನ್ ಅವರ 'ರಾಮನ್ ಪರಿಣಾಮ ಆವಿಷ್ಕಾರಗೊಂಡ ದಿನವನ್ನು ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಇಂದು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯಲ್ಲಿ 'ಓಪನ್ ಡೇ' ಆಯೋಜಿಸಲಾಗಿತ್ತು. ಶಾಲಾ ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ವಿಜ್ಞಾನದಲ್ಲಿ ಆಸಕ್ತಿ ಮೂಡಿಸುವ ಉದ್ದೇಶದೊಂದಿಗೆ ವಿವಿಧ ವಿಜ್ಞಾನ ಪ್ರದರ್ಶನಗಳನ್ನು ಏರ್ಪಡಿಸಲಾಗಿತ್ತು. ಈ ವೇಳೆ ವಿವಿಧ ಸರ್ಕಾರಿ ಮತ್ತು ಖಾಸಗಿ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ಸಾರ್ವಜನಿಕರು ಸೇರಿದಂತೆ ಸುಮಾರು ೧ ಸಾವಿರದ ೮೦೦ ಮಂದಿ ಭೇಟಿ ನೀಡಿ ಪ್ರದರ್ಶನ ವೀಕ್ಷಿಸಿದರು. ವಿಜ್ಞಾನ ಮತ್ತು ತಂತ್ರಜ್ಞಾನ ಕಾರ್ಯಕ್ರಮಗಳು, ಪ್ರಸ್ತುತದಲ್ಲಿನ ವಿವಿಧ ಸಂಶೋಧನಾ ಚಟುವಟಿಕೆಗಳ ಕುರಿತು ಪಿಎಚ್‌ಡಿ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ಸಂದರ್ಶಕರು ಚರ್ಚೆ ನಡೆಸಿದರು. ಮತ್ತೊಂದೆಡೆ ದೇಶದ ಪ್ರತಿಷ್ಠಿತ ಭಾರತೀಯ ವಿಜ್ಞಾನ ಸಂಸ್ಥೆ-ಐ.ಐ.ಎಸ್.ಸಿ ಯಲ್ಲಿ ನಾಳೆ ಬೆಳಗ್ಗೆ ೯ ರಿಂದ ಸಂಜೆ ೫ ರವರೆಗೆ 'ಓಪನ್ ಡೇ' ಆಚರಿಸಲಾಗುತ್ತಿದೆ. ಅಂದು ಸಾರ್ವಜನಿಕರು ಮಲ್ಲೇಶ್ವರಂನ ಐಐಎಸ್‌ಸಿ ಕ್ಯಾಂಪಸ್ ಗೆ ಭೇಟಿ ನೀಡಿ, ವಿಜ್ಞಾನ ಪ್ರದರ್ಶನಗಳನ್ನು ವೀಕ್ಷಿಸಬಹುದು. ಸ್ವತಃ ಪ್ರಯೋಗಗಳನ್ನು ಮಾಡಬಹುದು. ಸಾರ್ವಜನಿಕರು ವಿಜ್ಞಾನಿಗಳ ಜೊತೆ ಸಂವಾದದಲ್ಲೂ ಪಾಲ್ಗೊಳ್ಳಬಹುದು.

ಐಐಎಸ್‌ಸಿ ಯ ರಸಾಯನ ಶಾಸ್ತ್ರ, ಕಂಪ್ಯೂಟರ್ ಸೈನ್ಸ್ ಬಯೋ ಕೆಮಿಸ್ಟ್ರಿ ಸೇರಿದಂತೆ ೪೨ ವಿಭಾಗಗಳಿಗೆ ಭೇಟಿ ನೀಡಿ ಅಲ್ಲಿನ ಪ್ರಯೋಗಗಳನ್ನು ತಿಳಿಯಬಹುದು. ಐಐಎಸ್‌ಸಿ ಸಂಸ್ಥಾಪಕ ಜೆಮ್‌ಶೆಡ್ ಜಿ ಟಾಟಾ ಅವರ ಹುಟ್ಟು ಹಬ್ಬದ ಹಿನ್ನೆಲೆಯಲ್ಲಿ ಮಾರ್ಚ್ ಮೊದಲ ವಾರದ ಶನಿವಾರ ಓಪನ್ ಡೇ ಆಚರಿಸಲಾಗುತ್ತಿದೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಸರ್ಕಾರಿ ಆಯುರ್ವೇದ ಆಸ್ಪತ್ರೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಆಯುರ್ವೇದ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಖುದ್ಸಿಯ ತಸ್ನೀಯ, ಜನಸಾಮಾನ್ಯರಲ್ಲಿ ವಿಜ್ಞಾನದ ಬಗ್ಗೆ ಅರಿವು ಮೂಡಿಸುವುದೇ ರಾಷ್ಟ್ರೀಯ ವಿಜ್ಞಾನ ದಿನ ಆಚರಣೆಯ ಮುಖ್ಯ ಉದ್ದೇಶವಾಗಿದ್ದು, ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಸಕ್ತ ಬೆಳವಣಿಗೆ ಮತ್ತು ಅಭಿವೃದ್ಧಿಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ ಎಂದು ತಿಳಿಸಿದರು.

<><*<><>*><>

ವಿಜಯನಗರದ ಗತ ವೈಭವ ಸಾರುವ ಹಂಪಿ ಉತ್ಸವಕ್ಕೆ ಕೆಲಹೊತ್ತಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಹಂಪಿ ಉತ್ಸವದ ಅಂಗವಾಗಿ ಆಯೋಜಿಸಿರುವ ವಸ್ತು ಪ್ರದರ್ಶನದ ಮಳಿಗೆಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಉದ್ಘಾಟಿಸಿದರು. ಮಹಿಳಾ ಕವಿಗೋಷ್ಠಿಯನ್ನು ಉದ್ಘಾಟಿಸಿದ ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ಸಾಹಿತಿ ಕುಂ. ವೀರಭದ್ರಪ್ಪ ಮಾತನಾಡಿ, ಕನ್ನಡ ಕಾವ್ಯದ ತೊಟ್ಟಿಲು ಗ್ರಾಮೀಣ ಮಹಿಳೆಯಾಗಿದ್ದು, ಅವರನ್ನು ಗೌರವಿಸುವ ಕೆಲಸವನ್ನು ನಾವು ಮಾಡಬೇಕಿದೆ ಎಂದು ಹೇಳಿದರು. ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ ಮಾತನಾಡಿ, ಹಂಪಿ ಉತ್ಸವದಲ್ಲಿ ಹಿಂದಿನ ವರ್ಷದಿಂದ ಕವಿಗೋಷ್ಠಿಯನ್ನು ಪ್ರಾರಂಭಿಸಿದ್ದೇವೆ. ಮಹಿಳಾ ಕವಿಗೋಷ್ಠಿಯಲ್ಲಿ ಅವರ ಚಿಂತನೆಗಳು ಹೊರ ಬರಬೇಕು. ಮಹಿಳೆಯರು ತಮ್ಮ ಅಂತರಾಳದ ಭಾವನೆಗಳನ್ನು ಹೊರ ಹಾಕಲು ಇದೊಂದು ಒಳ್ಳೆಯ ವೇದಿಕೆಯಾಗಿದೆ ಎಂದರು. ಜಿಲ್ಲೆಯ ೪೨ ಮಹಿಳಾ ಕವಯಿತ್ರಿಯರು ಕಾರ್ಯಕ್ರಮದಲ್ಲಿ ತಮ್ಮ ಕವನಗಳನ್ನು ವಾಚಿಸಿದರು.

<><*<><>*><>

ಚಿಕ್ಕಬಳ್ಳಾಪುರ ಹಾಗೂ ರಾಯಚೂರು ಜಿಲ್ಲೆಯಲ್ಲಿ ಹಕ್ಕಿ ಜ್ವರ ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯಿಂದ ಕಟ್ಟೆಚ್ಚರ ವಹಿಸಲಾಗಿದೆ. ಕೋಳಿಗಳಲ್ಲಿ ಹಕ್ಕಿಜ್ವರ ಸೋಂಕು ದೃಢಪಟ್ಟಿರುವ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ತಾಲೂಕಿನ ಕಸಬಾ ಹೋಬಳಿಯ ವರದಹಳ್ಳಿಯಲ್ಲಿ

ಕೋಳಿ ಸಾಕಾಣಿಕೆ ಮತ್ತು ಹೊರಗಡೆಯಿಂದ ಕೋಳಿಗಳನ್ನು ಗ್ರಾಮಕ್ಕೆ ತರುವುದನ್ನು ನಿರ್ಬಂಧಿಸಿ, ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಆದೇಶ ಹೊರಡಿಸಿದ್ದಾರೆ. ಮೇ ೨೭ರ ವರೆಗೆ ಆದೇಶ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

**ಧ್ವನಿ: ರವೀಂದ್ರ, ಜಿಲ್ಲಾಧಿಕಾರಿ**

ಹಕ್ಕಿ ಜ್ವರ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಮುಂಜಾಗ್ರತೆ ಕ್ರಮ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ.ಸಾರ್ವಜನಿಕರು ಮತ್ತು ಕೋಳಿ ಸಾಕಾಣಿಕೆದಾರರಿಗೆ ಸೂಚನೆ ನೀಡಿದ್ದಾರೆ. ಹಕ್ಕಿಜ್ವರವು ಸಾಂಕ್ರಾಮಿಕ ರೋಗವಾಗಿದ್ದು, ಎಲ್ಲಾ ಬಗೆಯ ಕೋಳಿಗಳು ಸೇರಿದಂತೆ ಎಲ್ಲಾ ಹಕ್ಕಿ ಪ್ರಬೇದಗಳಲ್ಲಿ ಕಂಡು ಬರುತ್ತದೆ. ಮನುಷ್ಯರಿಂದ ಮನುಷ್ಯರಿಗೆ ಈ ರೋಗ ಹರಡುವುದಿಲ್ಲ ಎಂದು ಮಾಹಿತಿ ನೀಡಿದರು. ಕೋಳಿಗಳ ಮೂಗೂ, ಬಾಯಿ ಮತ್ತು ಕಣ್ಣಿನಿಂದ ನೀರು ಸುರಿಯುವುದು. ಮೊಣಕಾಲು ಮತ್ತು ಪಾದಗಳು ನೀಲಿ ಬಣ್ಣಕ್ಕೆ ತಿರುಗುವುದು ಹಕ್ಕಿ ಜ್ವರದ ಲಕ್ಷಣಗಳಾಗಿವೆ. ಕೋಳಿ ಸಾಕಾಣೆದಾರರು ಹಾಗೂ ಮಾರಾಟಗಾರರು ಸೂಕ್ತ ಮುನ್ನೆಚ್ಚರಿಕಾ ಕ್ರಮ ವಹಿಸಬೇಕು ಎಂದು ಅವರು ತಿಳಿಸಿದರು.

**<><*<><>*><>**

೧೬ನೇ ಬೆಂಗಳೂರು ಅಂತಾರಾಷ್ಟ್ರಿಯ ಚಲನಚಿತ್ರೋತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಚಾಲನೆ ನೀಡಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಚಲನಚಿತ್ರೋತ್ಸವದ ರಾಯಭಾರಿ ಕಿಶೋರ್ ಕುಮಾರ್, ಪೋಲೆಂಡ್ ಮೌಗುಜ್ಞಾತ ವೈಸಿಸ್‌ಗೋವಿನ್ವಿಯಾಖ್, ನಟಿ ಪ್ರಿಯಾಂಕಾ ಮೋಹನ್, ಎಂ. ನರಸಿಂಹಲು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಟ ಶಿವರಾಜ್ ಕುಮಾರ್, ಚಲನಚಿತ್ರೋತ್ಸವದ ಕೈಪಿಡಿ ಹಾಗೂ ಕಿರುಹೊತ್ತಿಗೆ ಬಿಡುಗಡೆ ಮಾಡಲಿದ್ದಾರೆ. ಮಾರ್ಚ್ ೨ ರಂದು ಒರಾಯನ್ ಮಾಲ್ ಹನ್ನೊಂದು ಸ್ರೀನ್‌ಗಳಲ್ಲಿ ಚಲನಚಿತ್ರ ಪ್ರದರ್ಶನ ಆರಂಭವಾಗಲಿದೆ. ಕಲಾಭವನ ಹಾಗೂ ಸುಚಿತ್ರ ಫಿಲ್ಮ್ ಸೊಸೈಟಿ ಚಿತ್ರಮಂದಿರಗಳಲ್ಲಿ ಪ್ರದರ್ಶನವಿದೆ. ಈಗಾಗಲೇ ೩ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ನೊಂದಾಯಿಸಿಕೊಂಡಿದ್ದಾರೆ. ಮಾರ್ಚ್ ೮ರವರೆಗೂ ನಡೆಯಲಿರುವ ಚಲನಚಿತ್ರೋತ್ಸವದಲ್ಲಿ ಹೊಸ ತಂತ್ರಜ್ಞಾನದ ಮೂಲಕ ಸಿನಿಮಾ ತಯಾರಿಕೆ, 'ಎಐ'ತಂತ್ರಜ್ಞಾನದ ಬಳಕೆ ಕುರಿತು ಉಪನ್ಯಾಸ, ಮಹಿಳಾ ಚಲನಚಿತ್ರಗಳ ಬಗ್ಗೆ ಸಂವಾದ, ಚರ್ಚೆ ಕಾರ್ಯಕ್ರಮಗಳು ನಡೆಯಲಿವೆ.

**<><*<><>*><>**

ಬೆಂಗಳೂರಿನಲ್ಲಿ ನಡೆಯುತ್ತಿರುವ ಗೆಫೆಕ್ಸ್ -೨೦೨೫ ಸಮಾವೇಶದ ಎರಡನೇ ದಿನವಾದ ಇಂದು ಆನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಸೇರಿದಂತೆ AVGC-XR ವಲಯಗಳ ಮೇಲೆ ಸುದೀರ್ಘ ಚರ್ಚೆ ಸಮಾಲೋಚನೆ ನಡೆಸಲಾಯಿತು. ಈ ಕಾರ್ಯಕ್ರಮವು ಇತ್ತೀಚಿನ ಪ್ರವೃತ್ತಿಗಳು ಮತ್ತು ನಾವೀನ್ಯತೆಗಳನ್ನು ಅನ್ವೇಷಿಸಲು ಉತ್ಸುಕರಾಗಿರುವ ಉದ್ಯಮ ವೃತ್ತಿಪರರು, ಕಲಾವಿದರು, ವಿದ್ಯಾರ್ಥಿಗಳು ಮತ್ತು ಉತ್ಸಾಹಿಗಳ ವೈವಿಧ್ಯಮಯ ಪ್ರೇಕ್ಷಕರನ್ನು ಆಕರ್ಷಿಸಿದೆ. ದಿನವಿಡೀ ಹಲವಾರು ಅಧಿವೇಶನಗಳನ್ನು ನಡೆಸಲಾಯಿತು, ಭಾರತೀಯ IP ಅನ್ನು ರಚಿಸುವಲ್ಲಿ ಜಾಗತಿಕ ಸಹಯೋಗ, ಮಾಧ್ಯಮ ಮತ್ತು ಮನರಂಜನೆಯಲ್ಲಿ AI,, ಗೇಮಿಂಗ್‌ನಲ್ಲಿ ಮಹಿಳೆಯರು, ಮುಂದಿನ ಪೀಳಿಗೆಯನ್ನು ಸಬಲೀಕರಣ ಮತ್ತಿತರ ವಿಷಯಗಳ ಕುರಿತು ವಿಚಾರಗೋಷ್ಠಿ ಏರ್ಪಡಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>**